ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

10

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನಮಂಡಲ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 17/9/20

## ಸಚಿವರು, ಶಾಸಕರಿಗೆ ಪರೀಕ್ಷೆ ಕಡ್ಡಾಯ

17/9/20

**ಬೆಂಗಳೂರು:** ಕೊರೊನಾ ಹಿನ್ನೆಲೆಯಲ್ಲಿ ವಿಧಾನಮಂಡಲ ಅಧಿವೇಶನಕ್ಕೆ ಹಾಜರಾಗುವ ಶಾಸಕರು, ಸಚಿವರ ಸಹಿತ ಎಲ್ಲ ಅಧಿಕಾರಿಗಳು ರ್‍ಯಾಪಿಡ್ ಆ್ಯಂಟಿಜನ್ ಪರೀಕ್ಷೆ ಮಾಡಿಸಿಕೊಂಡು ವರದಿ ಸಮೇತ ಸದನಕ್ಕೆ ಹಾಜರಾಗಬೇಕು ಎಂದು ಸುತ್ತೋಲೆ ಹೊರಡಿಸಲಾಗಿದೆ. ವಿಧಾನಸೌಧ ಬ್ಯಾಂಕ್ವೆಟ್ ಹಾಲ್‌ನಲ್ಲಿ ಸೆ.18ರಿಂದ ಆ್ಯಂಟಿಜನ್ ಪರೀಕ್ಷೆಗೆ ವ್ಯವಸ್ಥೆ ಮಾಡಲಾಗಿದ್ದು, ಸಚಿವರು, ಮುಖ್ಯಮಂತ್ರಿಯವರ ಸಚಿವಾಲಯ ಅಧಿಕಾರಿ ಸಿಬ್ಬಂದಿ, ಸಚಿವಾಲಯದ ಎಲ್ಲ ಇಲಾಖೆಗಳ ಅಧಿಕಾರಿ ಸಿಬ್ಬಂದಿ, ಸಚಿವರ ಆಪ್ತ ಕಾರ್ಯದರ್ಶಿ, ವಿಶೇಷ ಕರ್ತವ್ಯಾಧಿಕಾರಿಗಳು, ಲಿಫ್ಟ್ ಚಾಲಕರು ಪರೀಕ್ಷೆಗೆ ಒಳಪಟ್ಟು ವರದಿಯೊಂದಿಗೆ ಬರಬೇಕು ಎಂದು ಸೂಚಿಸಲಾಗಿದೆ.

ಎಲ್ಲ ಇಲಾಖಾ ಮುಖ್ಯಸ್ಥರು ಹಾಗೂ ಸದನಕ್ಕೆ ಹಾಜರಾಗುವ ಅಧಿಕಾರಿ, ಸಿಬ್ಬಂದಿ ತಮ್ಮ ಕಾರ್ಯಕ್ಷೇತ್ರಗಳಲ್ಲೇ ಆ್ಯಂಟಿಜನ್ ಪರೀಕ್ಷೆಗೆ ಒಳಪಟ್ಟು ವರದಿ ಪಡೆದು ಬರಬೇಕು ಎಂದು ಸೂಚಿಸಲಾಗಿದೆ.